**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ, ಮಳವಳ್ಳಿ.**

**ಸಿಸಿ ನಂಃ 20 /2022**

| | | | |
|---|---|---|---|
| ಹೆಸರು | ಃ | ಗುರುಸ್ವಾಮಿ | ಸಿ.ಡಬ್ಲ್ಯೂ 3 |
| ತಂದೆಯ ಹೆಸರು | ಃ | ಶಿವಪ್ಪ | ಪಿ.ಡಬ್ಲ್ಯೂ 3 |
| ವಯಸ್ಸು | ಃ | 50 ವರ್ಷ | |
| ಉದ್ಯೋಗ | ಃ | ವ್ಯವಸಾಯ | |
| ವಾಸ ಸ್ಥಳ | ಃ | ಮಳವಳ್ಳಿ | |

ಸಾಕ್ಷಿಗೆ ದಿನಾಂಕಃ **21.02.2024** ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಎ ಪಿ ಪಿ ರವರಿಂದ .**

ಚಾಸಾ 1 ರವರು ನನಗೆ ಗೊತ್ತಿಲ್ಲ. ಚಾಸಾ 2 ರವರು ನನಗೆ ಗೊತ್ತು. ಈಗ ನನಗೆ ತೋರಿಸಿದ ನಿಪಿ 4 ರಲ್ಲಿರುವ ಸಹಿ ನನ್ನದೇ. ಸದರಿ ಸಹಿಯನ್ನು ನಿಪಿ 4 ಸಿ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಮಳವಳ್ಳಿ ಗ್ರಾಮಾಂತರ ಠಾಣೆಯಲ್ಲಿ ಸಹಿ ಮಾಡಿದ್ದೇನೆ. ಚಾಸಾ 2 ರವರು ನನ್ನ ಸ್ನೇಹಿತರಾಗಿದ್ದು, ಅವರು ಹೇಳಿದ ಕಾರಣ ನಾನು ನಿಪಿ 4 ಕ್ಕೆ ಸಹಿ ಮಾಡಿರುತ್ತೇನೆ. ಏನು ವಿಚಾರ ಎಂದು ನಾನು ತಿಳಿದುಕೊಂಡಿಲ್ಲ. ನಾನು ಸಹಿ ಮಾಡಿದಾಗ ಸಮಯ ಎಷ್ಟಿತ್ತು ಎಂದು ನನಗೆ ಗೊತ್ತಿಲ್ಲ. ಚಾಸಾ 2 ರವರು ಸಹ ಸಹಿ ಮಾಡಿರುತ್ತಾರೆ. ನನ್ನ ಸಮಕ್ಷಮ ಯಾವುದೇ ಬರವಣಿಗೆಯಾಗಿಲ್ಲ.

**ಎಪಿಪಿ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಸಲಾಯಿತು.**

**ಪಾಟೀ ಸವಾಲುಃ ಎ ಪಿ ಪಿ ರವರಿಂದ ಃ**

ನಿಪಿ 4 ರಲ್ಲಿರುವ ಸಹಿಯನ್ನು ದಿ: 04.03.2021 ರಂದು ಬೂಗತಗಳ್ಳಿ ಗ್ರಾಮದಲ್ಲಿರುವ ಮದನ್ ಮೋಹನ್ ಕಲ್ಯಾಣ ಮಂಟಪದ ಮುಂದೆ ಲಕ್ಷ್ಮಮ್ಮರವರ

ಚಿನ್ನದ ಸರದ ಅಪರಿಚಿತ ವ್ಯಕ್ತಿಗಳು ದರೋಡೆಯಾಗಿದ್ದು, ಇದೇ ಜಾಗ ಎಂದು ತೋರಿಸಿದ್ದು, ಆ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದ್ದರು ಎಂದರೆ ಸರಿಯಲ್ಲ. ಆಗ ಸುಮಾರು 11-20 ರಿಂದ 11-50 ರವರಿಗೆ ಸ್ಥಳ ಪರಿಶೀಲನೆ ಮಾಡಿ ಸ್ಥಳ ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಆ ಸಂದರ್ಭ ನಾನು, ಚಾಸಾ 1, 2 ಮತ್ತು ಪೊಲೀಸರು ಹಾಜರಿದ್ದೆವು ಎಂದರೆ ಸರಿಯಲ್ಲ. ನಿಪಿ 4 ರಲ್ಲಿರುವ ಎಲ್ಲಾ ವಿಚಾರಗಳ ಬಗ್ಗೆ ತಿಳಿದಿದ್ದರೂ ಸಹ ಆರೋಪಿಗಳಿಗೆ ಅನುಕೂಲ ಮಾಡಿಕೊಡಲು ಗೊತ್ತಿದ್ದೂ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ವಕೀಲರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

**ಮರು ವಿಚಾರಣೆ ಇಲ್ಲ.**

ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.

ಓ ಹೇ ಕೇ ಸ ಇದೆ
ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಮಳವಳ್ಳಿ.